**CMRIT Student bags Gold Medal and Bantam belt in the National kick boxing championship held at Chennai**

**Publication: Prajavani**
**Date 02-12-21 Page 12**

## ಕಿಕ್ ಬಾಕ್ಸಿಂಗ್: ಚಿನ್ನ ಗೆದ್ದ ಪ್ರಿಯಾಂಕಾ



ಪ್ರಿಯಾಂಕಾ ರೆಡ್ಡಿ

ಬೆಂಗಳೂರು: ನಗರದ ಸಿಎಂಆರ್‌ಐಟಿಯ ವಿದ್ಯಾರ್ಥಿನಿ ಎಲ್. ಪ್ರಿಯಾಂಕಾ ರೆಡ್ಡಿ ಅವರು ಚೆನ್ನೈನಲ್ಲಿ ನಡೆದ ಫೈಟ್ ಲೀಗ್ ಚಾಂಪಿಯನ್‌ಷಿಪ್‌ನ ಕಿಕ್ ಬಾಕ್ಸಿಂಗ್‌ನಲ್ಲಿ ಚಿನ್ನ ಮತ್ತು ಟೈಟಲ್ ಬೆಲ್ಟ್ ತಮ್ಮದಾಗಿಸಿಕೊಂಡಿದ್ದಾರೆ.

ಭಾರತ ಮುಯ್‌ಥಾಯ್ ಸಂಸ್ಥೆ ಆಯೋಜಿಸಿದ್ದ ಸ್ಪರ್ಧೆಯಲ್ಲಿ ಇಲೆಕ್ಟ್ರಾನಿಕ್ಸ್ ಆ್ಯಂಡ್ ಕಮ್ಯುನಿಕೇಷನ್ ಎಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿನಿ ಪ್ರಿಯಾಂಕಾ, ಚೆನ್ನೈನ ಎದುರಾಳಿಯನ್ನು ಎಲ್ಲ ಸುತ್ತುಗಳಲ್ಲೂ ಮಣಿಸಿದರು ಎಂದು ಕಾಲೇಜಿನ ಪ್ರಕಟಣೆ ತಿಳಿಸಿದೆ.

**Publication: Vijayavani**
**Date 02-12-21 Page 07**

ವಿಜಯವಾಣಿ ನಂ 1

## ಕಿಕ್ ಬಾಕ್ಸಿಂಗ್‌ನಲ್ಲಿ ಪ್ರಿಯಾಂಕಾಗೆ ಚಿನ್ನ



ಬೆಂಗಳೂರು: ಚೆನ್ನೈನಲ್ಲಿ ನಡೆದ 8ನೇ ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಸ್ಪರ್ಧೆಯಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿದ್ದ ಸಿಎಂಆರ್‌ಐಟಿ ವಿದ್ಯಾರ್ಥಿನಿ ಪ್ರಿಯಾಂಕಾ ರೆಡ್ಡಿ ಚಿನ್ನದ ಪದಕ ಗೆದ್ದಿದ್ದಾರೆ. ದೇಶದ 350ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸಿದ್ದರು. ಬೆಲ್ಟ್ ಇನ್ ದಿ ಬಾಟಮ್ ವೈಟ್ ವಿಭಾಗದಲ್ಲಿ ಪ್ರಿಯಾಂಕಾ ಪ್ರಶಸ್ತಿ ಬಾಚಿದರು. ಈ ಹಿಂದೆ ಗೋವಾದಲ್ಲಿ ನಡೆದಿದ್ದ ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಸ್ಪರ್ಧೆಯಲ್ಲೂ ಚಿನ್ನದ ಪದಕ ಗೆದ್ದಿದ್ದರು. ಪ್ರಿಯಾಂಕಾಗೆ ಕಾಲೇಜಿನ ಪ್ರಾಂಶುಪಾಲ ಡಾ. ಸಂಜಯ್ ಜೈನ್ ಅಭಿನಂದಿಸಿದ್ದಾರೆ.

Bengaluru Edition
Dec 2, 2021 Page No. 7
Powered by : eReleGo.com

**Publication: Eesanje**
**Date 02-12-21 Page 06**

# ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಸ್ಪರ್ಧೆಯಲ್ಲಿ
# ಸಿಎಂಆರ್‌ಐಟಿ ವಿದ್ಯಾರ್ಥಿನಿ ಚಾಂಪಿಯನ್

**ಬೆಂಗಳೂರು, ಡಿ.2-** ನಗರದ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ಎಂಜಿನಿಯರಿಂಗ್ ವಿದ್ಯಾರ್ಥಿನಿ ಪ್ರಿಯಾಂಕರೆಡ್ಡಿ ಇತ್ತೀಚೆಗೆ ಚೆನ್ನೈನಲ್ಲಿ ನಡೆದ 8ನೇ ರಾಷ್ಟ್ರೀಯ ಮಟ್ಟದ ಕಿಕ್ ಬಾಕ್ಸಿಂಗ್ ಚಾಂಪಿಯನ್‌ಶಿಪ್ ಗೆದ್ದು ಚಿನ್ನದ ಪದಕವನ್ನು ಮುಡಿಗೇರಿಸಿಕೊಂಡಿದ್ದಾರೆ.

ಚೆನ್ನೈನ ಇಂಡಿಯನ್ ಮುಯ್ತೈಆರ್ಗನೈಜೆಷನ್ ಫೈಟ್ ಲೀಗ್‌ಚಾಂಪಿಯನ್ ಶಿಪ್ -2021ರಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್‌ನಲ್ಲಿ ಪ್ರಿಯಾಂಕರೆಡ್ಡಿ ಕರ್ನಾಟಕವನ್ನು ಪ್ರತಿನಿಧಿಸಿದ್ದರು. ದೇಶದ 350ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸಿದ್ದ ಕಿಕ್ ಬಾಕ್ಸಿಂಗ್ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಪ್ರಿಯಾಂಕರೆಡ್ಡಿ ಎಲ್ಲಾ ಸುತ್ತುಗಳನ್ನು ಗೆದ್ದು ಫೈನಲ್ ಪ್ರವೇಶಿಸಿ ಫೈನಲ್‌ನಲ್ಲೂ ಎದುರಾಳಿಯನ್ನು ಮಣಿಸುವ ಮೂಲಕ ಬೆಲ್ಟ್ ಇನ್ ದಿ ಬಾಂಟಮ್ ವೈಟ್ ವಿಭಾಗದಲ್ಲಿ ಚಿನ್ನದ ಪದಕವನ್ನು ಗೆದ್ದುಚಾಂಪಿಯನ್ ಆಗಿ ಹೊರ ಹೊಮ್ಮಿದ್ದಾರೆ.

ಈ ಹಿಂದೆ ಗೋವಾದಲ್ಲಿ ನಡೆದಿದ್ದ ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಸ್ಪರ್ಧೆಯಲ್ಲೂ ಚಿನ್ನದ ಪದಕ ತನ್ನದಾಗಿಸಿಕೊಂಡಿದ್ದರು. ಈಗ ಮತ್ತೊಮ್ಮೆ ಚಾಂಪಿಯನ್ ಆಗುವ ಮೂಲಕ ಕಾಲೇಜಿನ ಕೀರ್ತಿ ಹಾಗೂ ಕರ್ನಾಟಕದ ಕೀರ್ತಿಯನ್ನುಎತ್ತಿ ಹಿಡಿದಿದ್ದಾರೆ.



ಇನ್ನು ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಸ್ಪರ್ಧೆಯಲ್ಲಿ ಚಾಂಪಿಯನ್ ಆಗಿರುವ ಇಸಿಇ ವಿಭಾಗದ ಎಂಜಿನಿಯರಿಂಗ್ ವಿದ್ಯಾರ್ಥಿನಿ ಪ್ರಿಯಾಂಕ ರೆಡ್ಡಿಯ ಸಾಧನೆಯನ್ನು ಸಿಎಂಆರ್‌ಐಟಿ ಕಾಲೇಜಿನ ಪ್ರಾಂಶುಪಾರಾದ ಡಾ. ಸಂಜಯ್‌ಜೈನ್ ಹಾಗೂ ಕಾಲೇಜು ಆಡಳಿತ ಮಂಡಳಿ ಮನದುಂಬಿ ಶ್ಲಾಘಿಸಿದ್ದಾರೆ.

ಈ ಸಂಜೆ Thu, 02 December 2021
https://epaper.eesanje.com/c/64709661

**Publication: Suvarna Times of Karnataka**
**Date 02-12-21 Page 02**

# ಸಿಎಂಆರ್‌ಐಟಿ ವಿದ್ಯಾರ್ಥಿನಿ ಚಾಂಪಿಯನ್




**ಬೆಂಗಳೂರು:** ನಗರದ ಸಿಎಂಆರ್ ತಾಂತ್ರಿಕ ಮಹಾ ವಿದ್ಯಾಲಯದ ಎಂಜಿನಿಯರಿಂಗ್ ವಿದ್ಯಾರ್ಥಿನಿ ಪ್ರಿಯಾಂಕ ರೆಡ್ಡಿ ಇತ್ತೀಚೆಗೆ ಚೆನ್ನೈನಲ್ಲಿ ನಡೆದ 8ನೇ ರಾಷ್ಟ್ರೀಯ ಮಟ್ಟದ ಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್ ಗೆದ್ದು ಚಿನ್ನದ ಪದಕ ಮುಡಿಗೇರಿಸಿಕೊಂಡಿದ್ದಾರೆ.

ಚೆನ್ನೈನ ಇಂಡಿಯನ್ ಮುಯ್ತೈ ಆರ್ಗನೈಜೆಷನ್ ಫೈಟ್ ಲೀಗ್ ಚಾಂಪಿಯನ್ ಶಿಪ್ –2021ರ ಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್‌ನಲ್ಲಿ ಪ್ರಿಯಾಂಕ ರೆಡ್ಡಿ ಕರ್ನಾಟಕವನ್ನು ಪ್ರತಿನಿಧಿಸಿದ್ದರು. ದೇಶದ 350ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗ ವಹಿಸಿದ್ದ ಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಪ್ರಿಯಾಂಕ ರೆಡ್ಡಿ ಎಲ್ಲಾ ಸುತ್ತುಗಳನ್ನು ಗೆದ್ದು ಫೈನಲ್ ಪ್ರವೇಶಿಸಿ ಫೈನಲ್‌ನಲ್ಲೂ ಎದುರಾಳಿಯನ್ನು ಮಣಿಸುವ ಮೂಲಕ ಬೆಲ್ಟ್ ಇನ್ ದಿ ಬಾಂಟಮ್ ವೈಟ್ ವಿಭಾಗದಲ್ಲಿ ಚಿನ್ನದ ಪದಕವನ್ನು ಗೆದ್ದು ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ.

ಇನ್ನು ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಸ್ಪರ್ಧೆಯಲ್ಲಿ ಚಾಂಪಿ ಯನ್ ಆಗಿರುವ ಇಸಿಇ ವಿಭಾಗದ ಎಂಜಿನಿಯರಿಂಗ್ ವಿದ್ಯಾರ್ಥಿನಿ ಪ್ರಿಯಾಂಕ ರೆಡ್ಡಿಯ ಸಾಧನೆಯನ್ನು ಸಿಎಂಆರ್‌ಐಟಿ ಕಾಲೇಜಿನ ಪ್ರಾಂಶುಪಾರಾದ ಡಾ. ಸಂಜಯ್ ಜೈನ್ ಹಾಗೂ ಕಾಲೇಜು ಆಡಳಿತ ಮಂಡಳಿ ಮನದುಂಬಿ ಶ್ಲಾಘಿಸಿದ್ದಾರೆ.

**Publication: Vartha Prabha**

**Date 02-12-21 Page 02**

# ರಾಷ್ಟ್ರೀಯ ಕಿಕ್‌ಬಾಕ್ಸಿಂಗ್ ಸ್ಪರ್ಧೆಯಲ್ಲಿ ಸಿಎಂಆರ್‌ಐಟಿ ವಿದ್ಯಾರ್ಥಿನಿ ಚಾಂಪಿಯನ್



ನಗರದ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ಎಂಜಿನಿಯರಿಂಗ್ ವಿದ್ಯಾರ್ಥಿನಿ ಪ್ರಿಯಾಂಕ ರೆಡ್ಡಿ ಇತ್ತೀಚೆಗೆ ಚೆನ್ನೈನಲ್ಲಿ ನಡೆದ 8ನೇ ರಾಷ್ಟ್ರೀಯ ಮಟ್ಟದ ಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್ ಗೆದ್ದು ಚಿನ್ನದ ಪದಕವನ್ನು ಮುಡಿಗೇರಿಸಿಕೊಂಡಿದ್ದಾರೆ.

ಚೆನ್ನೈನ ಇಂಡಿಯನ್ ಮುಯ್ತೈ ಆರ್ಗನೈಜೆಷನ್ ಫೈಟ್ ಲೀಗ್ ಚಾಂಪಿಯನ್ ಶಿಪ್ –2021 ರ ಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್‌ನಲ್ಲಿ ಪ್ರಿಯಾಂಕ ರೆಡ್ಡಿ ಕರ್ನಾಟಕವನ್ನು ಪ್ರತಿನಿಧಿಸಿದ್ದರು. ದೇಶದ 350ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸಿದ್ದ ಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಪ್ರಿಯಾಂಕ ರೆಡ್ಡಿ ಎಲ್ಲಾ ಸುತ್ತುಗಳನ್ನು ಗೆದ್ದು ಫೈನಲ್ ಪ್ರವೇಶಿಸಿ ಫೈನಲ್‌ನಲ್ಲೂ ಎದುರಾಳಿಯನ್ನು ಮಣಿಸುವ ಮೂಲಕ ಬೆಲ್ಟ್ ಇನ್ ದಿ ಬಾಂಟಮ್ ವೈಟ್ ವಿಭಾಗದಲ್ಲಿ ಚಿನ್ನದ ಪದಕವನ್ನು ಗೆದ್ದು ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ.

ಈ ಹಿಂದೆ ಗೋವಾದಲ್ಲಿ ನಡೆದಿದ್ದ ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಸ್ಪರ್ಧೆಯಲ್ಲೂ ಚಿನ್ನದ ಪದಕ ತನ್ನದಾಗಿಸಿಕೊಂಡಿದ್ದರು. ಈಗ ಮತ್ತೊಮ್ಮೆ ಚಾಂಪಿಯನ್ ಆಗುವ ಮೂಲಕ ಕಾಲೇಜಿನ ಕೀರ್ತಿ ಹಾಗೂ ಕರ್ನಾಟಕದ ಕೀರ್ತಿಯನ್ನು ಎತ್ತಿಹಿಡಿದಿದ್ದಾರೆ.

ಇನ್ನು ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಸ್ಪರ್ಧೆಯಲ್ಲಿ ಚಾಂಪಿಯನ್ ಆಗಿರುವ ಇಸಿಇ ವಿಭಾಗದ ಎಂಜಿನಿಯರಿಂಗ್ ವಿದ್ಯಾರ್ಥಿನಿ ಪ್ರಿಯಾಂಕ ರೆಡ್ಡಿಯ ಸಾಧನೆಯನ್ನು ಸಿಎಂಆರ್‌ಐಟಿ ಕಾಲೇಜಿನ ಪ್ರಾಂಶುಪಾರಾದ ಡಾ. ಸಂಜಯ್ ಜೈನ್ ಹಾಗೂ ಕಾಲೇಜು ಆಡಳಿತ ಮಂಡಳಿ ಮನದುಂಬಿ ಶ್ಲಾಘಿಸಿದ್ದಾರೆ.